# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 502 |
| ಸದಸ್ಯರ ಹೆಸರು | : | ಶ್ರೀ ಎಸ್.ರವಿ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 20.02.2023 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ<br>ಹಾಗೂ ಸಕಾಲ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರವು ಈ ಹಿಂದೆ ಜಾರಿಗೆ ತಂದಿದ್ದ ಉಚಿತ ಸೈಕಲ್ ಮತ್ತು ಷೂ ಭಾಗ್ಯ ಯೋಜನೆಗಳನ್ನು ಸ್ಥಗಿತಗೊಳಿಸಲಾಗಿದೆಯೇ; ಸ್ಥಗಿತಗೊಳಿಸದ್ದಲ್ಲಿ, ಇದಕ್ಕೆ ಕಾರಣಗಳೇನು; (ಮಾಹಿತಿ ನೀಡುವುದು) | 2020-21 ಮತ್ತು 2021-22ನೇ ಸಾಲಿನಲ್ಲಿ ಕೋವಿಡ್-19ರ ಹಿನ್ನೆಲೆಯಲ್ಲಿ ಆರ್ಥಿಕ ಮಿತವ್ಯಯ ಜಾರಿಯಲ್ಲಿರುವುದರಿಂದ ಹಾಗೂ ಭೌತಿಕ ತರಗತಿಗಳು ಪ್ರಾರಂಭವಾಗದ ಕಾರಣ ಶೂ ಸಾಕ್ಸ್ ಮತ್ತು ಬೈಸಿಕಲ್‌ಗಳನ್ನು ವಿತರಿಸಲಾಗಿರುವುದಿಲ್ಲ.<br><br>ಆದರೆ ಪ್ರಸಕ್ತ ಸಾಲಿನಲ್ಲಿ ಸರ್ಕಾರಿ ಶಾಲೆಗಳಲ್ಲಿ 1 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ಒಟ್ಟು 46.37 ಲಕ್ಷ ವಿದ್ಯಾರ್ಥಿಗಳಿಗೆ ಉಚಿತವಾಗಿ ಒಂದು ಜೊತೆ ಶೂ ಮತ್ತು ಎರಡು ಜೊತೆ ಸಾಕ್ಸ್ ವಿತರಿಸಲಾಗಿದೆ.<br><br>2022-23ನೇ ಸಾಲಿನಲ್ಲಿ ಉಚಿತ ಬೈಸಿಕಲ್ ಯೋಜನೆಯ ಅನುಷ್ಠಾನಕ್ಕಾಗಿ ಅನುದಾನ ಬಿಡುಗಡೆಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದ್ದು, ಸದರಿ ಪ್ರಸ್ತಾವನೆ ಪರಿಶೀಲನಾ ಹಂತದಲ್ಲಿದೆ. |
| ಆ) | ಈ ಯೋಜನೆಯನ್ನು ಸ್ಥಗಿತಗೊಳಿಸದಿದ್ದಲ್ಲಿ, ಕಳೆದ 2 ವರ್ಷಗಳಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಸೈಕಲ್ ಮತ್ತು ಷೂ ಗಳನ್ನು ವಿತರಣೆ ಮಾಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು) | |
| ಇ) | ಮುಂದಿನ ಶೈಕ್ಷಣಿಕ ವರ್ಷದಿಂದ ಉಚಿತ ಸೈಕಲ್ ಮತ್ತು ಷೂ ಸಾಕ್ಸ್‌ಗಳನ್ನು ಖರೀದಿಸಲು ನೇರವಾಗಿ ಮಕ್ಕಳ ಖಾತೆಗೆ ಅನುದಾನ ಬಿಡುಗಡೆ ಮಾಡುವ ಚಿಂತನೆ ಸರ್ಕಾರಕ್ಕಿದೆಯೇ; ಇದ್ದಲ್ಲಿ, ಪ್ರತಿಯೊಬ್ಬ ವಿದ್ಯಾರ್ಥಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗುವುದು? (ಮಾಹಿತಿ ನೀಡುವುದು) | ಈ ರೀತಿಯ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ. |

ಇಪಿ: 13 ಎಂಪಿಇ 2023

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ
ಹಾಗೂ ಸಕಾಲ ಸಚಿವರು